# ದಲಿತರಿಗೆ ನ್ಯಾಯ ಕೊಡದಿದ್ದರೆ ವಿಧಾನಸಭೆ ವಿಸರ್ಜಿಸಿ ಚುನಾವಣೆ ಎದುರಿಸಿ

• **ಉದಯವಾಹಿನಿ ರಾಯಚೂರು:**

ದಲಿತರು ಹಾಗೂ ಹಿಂದುಳಿದ ವರ್ಗಗಳಿಗೆ ನ್ಯಾಯ ನೀಡಲು ಕಾಂಗ್ರೆಸ್ ಸರ್ಕಾರಕ್ಕೆ ಸಾಧ್ಯವಾಗದಿದ್ದರೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಧಾನಸಭೆಯನ್ನು ವಿಸರ್ಜಿಸಿ ಚುನಾವಣೆ ಎದುರಿಸಲಿ. ಆಗ ಜನರೇ ತೀರ್ಮಾನ ಮಾಡುತ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸವಾಲು ಹಾಕಿದರು.

'ಬಳ್ಳಾರಿ ಚಲೋ' ಪಾದಯಾತ್ರೆಯ ಎರಡನೇ ದಿನ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದಲಿತರ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಕಳೆದ ಮೂರುವರೆ ವರ್ಷಗಳಲ್ಲಿ ಅವರಿಗೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಹಗರಣ ನಡೆದಿದೆ. ಮೀಸಲಾತಿಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿಲ್ಲ. ಮೀಸಲಾತಿ ನೆಪದಲ್ಲಿ ಯುವಕರಿಗೆ ಉದ್ಯೋಗ


ಉದಯವಾಹಿನಿ ಚಿತ್ರ

ನೀಡದೆ ದಲಿತರು ಸೇರಿದಂತೆ ಎಲ್ಲಾ ಸಮುದಾಯಗಳನ್ನು ನಿರ್ಲಕ್ಷ್ಯ ಮಾಡಲಾಗಿದೆ. ಒಟ್ಟಾರೆ ಅಖಂಡ ಕರ್ನಾಟಕವನ್ನೇ ಕಡೆಗಣಿಸಲಾಗಿದೆ ಎಂದು ವಾಗ್ದಾಳಿ ನಡೆಸಿದರು. ಡಿಕೆಶಿ ಸರ್ಕಾರದ ಇನ್ನೂ ಎರಡು-ಮೂರು ವಿಕೆಟ್‌ಗಳು ಬೀಳಲು ಸಿದ್ಧವಾಗಿವೆ. ಭ್ರಷ್ಟಾಚಾರವೇ ಈ ಸರ್ಕಾರಕ್ಕೆ ಉರುಳಾಗಲಿದೆ. ಬಿಜೆಪಿ ಜನರ ಸಮಸ್ಯೆಗಳಿಗಾಗಿ ಬೀದಿಗಿಳಿದು ಹೋರಾಟ ನಡೆಸುತ್ತಿದ್ದು, ರೈತರೂ ನಮ್ಮೊಂದಿಗೆ ಪ್ರತಿಭಟನೆಯಲ್ಲಿ ಭಾಗಿಯಾಗುತ್ತಿದ್ದಾರೆ. ಅನ್ನದಾತರ ಸಮಸ್ಯೆಗಳನ್ನು ಆಲಿಸುವ ಕನಿಷ್ಠ ಸೌಜನ್ಯವನ್ನೂ ಮುಖ್ಯಮಂತ್ರಿ ತೋರಿಸುತ್ತಿಲ್ಲ ಎಂದು ಟೀಕಿಸಿದರು. ಬಿಜೆಪಿ ಈಗಾಗಲೇ ರಾಜ್ಯಾದ್ಯಂತ ಬರ ವೀಕ್ಷಣೆ ನಡೆಸಿದೆ.

ಈವರೆಗೆ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡದ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಈಗ ಕಾಟಾಚಾರದ ಬರ ವೀಕ್ಷಣೆ ಆರಂಭಿಸಿದ್ದಾರೆ. ಎಸಿ ಕೊಠಡಿಗಳಲ್ಲಿದ್ದವರು ಈಗ ಅನಿವಾರ್ಯವಾಗಿ ರೈತರ ಸಮಸ್ಯೆ ಕೇಳಲು ಹೊರಟಿದ್ದಾರೆ. ಇದಕ್ಕೆ ಬಿಜೆಪಿ ಹೋರಾಟವೇ ಕಾರಣ ಎಂದು ಹೇಳಿದರು.

# ಆರೋಗ್ಯ ಸಲಹೆಗಳ ಬಗ್ಗೆಸೂಚನಾ ಫಲಕ ಅಳವಡಿಕೆಗೆ ಕ್ರಮ

## ಮಂಗಳೂರಿನಲ್ಲಿಯೂ ಕ್ಯೂಆರ್ ಕೋಡ್ ಮೂಲಕ ಬಂದ ದೂರಿನ ಹಿನ್ನೆಲೆಯಲ್ಲಿ ಈಗಾಗಲೇ ಎರಡು ದಾಳಿ ನಡೆದಿದೆ

• **ಉದಯವಾಹಿನಿ ಮಂಗಳೂರು,**

ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಹೋಟೇಲ್, ರೆಸ್ಟೋರೆಂಟ್, ಆಹಾರ ಮಳಿಗೆಗಳು ಮಾತ್ರವಲ್ಲದೆ, ಪಿಜಿಗಳಿಗೂ ಅಧಿಕಾರಿಗಳಿಂದ ತಪಾಸಣೆ, ದಾಳಿ ಕ್ರಮಗಳು ಮುಂದುವರಿಯಲಿದೆ. ಜತೆಗೆ ಸಾರ್ವಜನಿಕ ಸ್ಥಳವನ್ನು ಒಳಗೊಂಡು ಆಹಾರ ಗುಣಮಟ್ಟದ ಬಗ್ಗೆ ದೂರು ನೀಡಲು ಅನುಕೂಲವಾಗುವಂತೆ ಕ್ಯೂಆರ್ ಕೋಡ್

1 : ಸಮಾಜಕ್ಕೆ ಕೊಡುಗೆ ನೀಡಬೇಕು
2 : ಈಗಾಗಲೇ ಎರಡು ದಾಳಿ ನಡೆದಿದೆ
3 : ಪ್ರಥಮ ಹಂತದಲ್ಲಿ ಕನಿಷ್ಟ ದಂಡ

ಅಳವಡಿಸುವ ಜತೆಗೆ ಆರೋಗ್ಯ ಸಲಹೆಗಳ ಸೂಚನಾ ಫಲಕಗಳನ್ನು ಅಳವಡಿಸಲು ಕ್ರಮ ವಹಿಸುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.

ನಗರದ ಸರ್ಕ್ಯೂಟ್ ಹೌಸ್‌ನಲ್ಲಿ ಬುಧವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ವಿಭಾಗದಿಂದ ಹಲವೆಡೆ ದಾಳಿ ನಡೆಯುತ್ತಿದೆ. ಯಾರೇ ನಿಯಮ ಉಲ್ಲಂಘನೆ ಮಾಡಿ ಸಿಕ್ಕಿ ಬಿದ್ದರೂ ನನ್ನ ಆತ್ಮೀಯರಾಗಿದ್ದರೂ


ಉದಯವಾಹಿನಿ ಚಿತ್ರ

> ಹಿಂದೂ ಧರ್ಮವನ್ನು ಅತ್ಯುತ್ತಮವಾಗಿ ಪಾಲಿಸುತ್ತಾರೆ, ಅವರು ದೇವಭಕ್ತ ಕೂಡಾ. ಅವರ ಹೇಳಿಕೆಯನ್ನು ರಾಜಕೀಯ ಮಾಡುವ ನೀಚ ಮನಸ್ಥಿತಿ ಯಾಕೆ ಎಂದು ಪ್ರಶ್ನಿಸಿದ ಯು.ಟಿ.ಖಾದರ್, ಈ ರೀತಿ ರಾಜಕೀಯ ಮಾಡುವವರು ದೇಶಪ್ರೇಮಿ ಆಗಲು ಸಾಧ್ಯವಿಲ್ಲ ಎಂದರು.
> -ಸಚಿವ ಯು.ಟಿ.ಖಾದರ್

ಬಿಡುವ ಪ್ರಶ್ನೆ ಇಲ್ಲ. ಯಾಕೆಂದರೆ ಅಲ್ಲಿ ಆಹಾರ ಸೇವಿಸುವವರೂ ನನ್ನ ಆತ್ಮೀಯರಾಗಿದ್ದು, ಅವರ ಪರವಾಗಿ ನಾನು ನಿಲ್ಲಬೇಕು. ಹಾಗಾಗಿ ಎಲ್ಲರೂ ಆಹಾರ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಹೇಳಿದರು. ಮಂಗಳೂರಿನಲ್ಲಿಯೂ ಕ್ಯೂಆರ್ ಕೋಡ್ ಮೂಲಕ ಬಂದ ದೂರಿನ ಹಿನ್ನೆಲೆಯಲ್ಲಿ ಈಗಾಗಲೇ ಎರಡು ದಾಳಿ ನಡೆದಿದೆ.

ಆ್ಯಪ್‌ನಲ್ಲಿರುವ ಕ್ಯೂಆರ್ ಕೋಡ್‌ಗಳನ್ನು ಹೋಟೇಲ್, ಆಹಾರ

> ಆಹಾರ ಗುಣಮಟ್ಟ ತಪಾಸಣೆಗೆ ಸಂಬಂಧಿಸಿ ಸುಸಜ್ಜಿತ ಲ್ಯಾಬ್ ಆರಂಭಿಸುವ ಯೋಜನೆ ಆರಂಭಿಕ ಹಂತದಲ್ಲಿದೆ. ಕಳಪೆ ಆಹಾರ ಪೂರೈಕೆ ಸಂಬಂಧಿಸಿ ನಡೆಯುವ ದಾಳಿ ವೇಳೆ ಸಿಕ್ಕಿಬೀಳುವ ದೊಡ್ಡ ಕಂಪನಿಗಳು ನ್ಯಾಯಾಲಯದ ಮೂಲಕ ರಕ್ಷಣೆ ಪಡೆದು ಲ್ಯಾಬ್ ಸರಿ ಇಲ್ಲ ಎಂಬ ಸಬೂಬು ನೀಡಿ ಬಚಾವ್ ಆಗುತ್ತಾರೆ.
> -ಸಚಿವ ಯು.ಟಿ.ಖಾದರ್

ಮಳಿಗೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲೂ ಅಳವಡಿಸಲು ಕ್ರಮ ವಹಿಸಲಾಗುವುದು. ಯಾರ ವ್ಯಾಪಾರ ಬಂದ್ ಮಾಡಿಸಬೇಕೆಂಬುದು ನಮ್ಮ ಉದ್ದೇಶವವಲ್ಲ. ಆದರೆ ಜನರಿಗೆ ಮೋಸ ಆಗಬಾರದು. ವ್ಯಾಪಾರಿಗಳೂ ತಮ್ಮ ಬದುಕಟ್ಟಿಕೊಳ್ಳಬೇಕು. ವ್ಯಾಪಾರದ ಮೂಲಕ ಅವರೂ ಸಮಾಜಕ್ಕೆ ಕೊಡುಗೆ ನೀಡಬೇಕು. ಹಾಗಾಗಿ ಇದೀಗ ಪ್ರಥಮ ಹಂತದಲ್ಲಿ ಕನಿಷ್ಟ ದಂಡದ ಮೂಲಕ ಎಚ್ಚರಿಕೆ ನೀಡುವ ಕ್ರಮ ಆಗುತ್ತಿದೆ ಎಂದು ಅವರು ಹೇಳಿದರು. ಪಡಿತರ ಹಾಗೂ ಇತರ ಆಹಾರದ ಕಲಬೆರಕೆಗೆ ಸಂಬಂಧಿಸಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವ ಯು.ಟಿ.ಖಾದರ್, ಈ ಬಗ್ಗೆ ದೂರು ಬಂದಾಗ ಕ್ರಮ ಆಗಲಿದೆ ಎಂದರು.

ಎಸ್‌ಐಆರ್‌ಗೆ ಸಂಬಂಧಿಸಿ ದ್ವಿತೀಯ ಹಂತದ ಪರಿಶೀಲನೆ ನಡೆಯುತ್ತಿದ್ದು, ಈ ಸಂದರ್ಭ ಪಟ್ಟಿಯಿಂದ ಹೆಸರು ತೆಗೆಯುವುದು

> ಯಾವುದೇ ಪಕ್ಷದಲ್ಲಿ ಇದ್ದರೂ ಗೌರವಿಸಬೇಕು. ಅವರು ಯಾವತ್ತೂ ಜನರಿಗೆ ತೊಂದರೆ ಮಾಡಿಲ್ಲ. ಶಾಸರಕಾಗಿದ್ದ ಸಂದರ್ಭ 1 ರೂ. ಮಾತ್ರ ಪಡೆಯುತ್ತಿದ್ದ ಅವರನ್ನು ರಾಯಲ್ ರೆಡ್ಡಿ ಎಂದೇ ಕರೆಯಲಾಗುತ್ತಿತ್ತು. ಅವರು ಕಾರ್ಯಕ್ರಮಕ್ಕೆ ಹೋಗಿದ್ದ ವೇಳೆ ಸಂದರ್ಭಕ್ಕೆ ತಕ್ಕ ಹಾಗೆ ತಮ್ಮ ಮನಸ್ಸಿಗೆ ಬಂದಿದ್ದನ್ನು ಮುಕ್ತವಾಗಿ ಹಂಚಿಕೊಂಡಿದ್ದಾರೆ.

ಮಾತ್ರವಲ್ಲ, ಅರ್ಹ ಮತದಾರರ ಹೆಸರು ಸೇರ್ಪಡೆ ಬಗ್ಗೆ ಗಮನ ಹರಿಸುವಂತೆ ಚುನಾವಣಾ ಆಯೋಗದ ಆಯುಕ್ತರಿಗೆ ಮನವಿ ಮಾಡಲಾಗಿದೆ. ಹೆಸರಿನಲ್ಲಿ ತೊಂದರೆ ಇದ್ದಾಗ ಸರಿಪಡಿಸುವ ಕೆಲಸ ವಾಗಬೇಕು. ಮ್ಯಾಪಿಂಗ್‌ಗೆ ಸಂಬಂಧಿಸಿ ವಿದೇಶದಲ್ಲಿ ಇರುವ ನೆಪದಲ್ಲಿ ಮತದಾರರ ಪಟ್ಟಿಯಿಂದ ಕೈಬಿಡಬಾರದು. ಅವರಿಗೆ ವಿಶೇಷ ವ್ಯವಸ್ಥೆ ಮಾಡಿ ಮತದಾನದ ಹಕ್ಕು ಒದಗಿಸಬೇಕು. ನನ್ನ ವ್ಯಾಪ್ತಿಯಲ್ಲಿ ಅಧಿಕಾರಿಗಳು ಉತ್ತಮ ಕೆಲಸ ಮಾಡಿದ್ದಾರೆ. ಎನ್ಯುಮರೇಶನ್ ಫಾರಂ ಭರ್ತಿ ಮಾಡಿ ಬಿಎಲ್‌ಒಗಳಿಗೆ ನೀಡದಿದ್ದಲ್ಲಿ ಅದು ಜನರ ಸಮಸ್ಯೆಯೇ ಹೊರತು ಅಧಿಕಾರಿಗಳದ್ದಲ್ಲ. ಹಾಗಾಗಿ ದ್ವಿತೀಯ ಹಂತ ಸೇರಿದಂತೆ ಮುಂದಿನ ಹಂತದ ಎಲ್ಲಾ ರೀತಿಯ ಪರಿಶೀಲನಾ ವ್ಯವಸ್ಥೆಯನ್ನು ರಾಜ್ಯಕ್ಕೆ ಏಕ ಮಾದರಿಯಲ್ಲಿ ನಡೆಸಲು ಚುನಾವಣಾ ಆಯೋಗ ಕ್ರಮ ವಹಿಸಬೇಕು ಎಂದು ಸಚಿವ ಯು.ಟಿ.ಖಾದರ್ ಹೇಳಿದರು.

# ಮಹಿಳೆಯರು ಮುತ್ತು ರತ್ನಗಳಿದ್ದಂತೆ:ಮಂಜಮ್ಮ ಜೋಗತಿ

• **ಉದಯವಾಹಿನಿ ಬಳ್ಳಾರಿ,**

ಭಾರತ ದೇಶದಲ್ಲಿ ಮಹಿಳೆಯರ ಪಾತ್ರ ಬಹುಮುಖ್ಯವಿದೆ, ಆ ನಿಟ್ಟಿನಲ್ಲಿ ಮಹಿಳೆಯರು ನನ್ನ ದೃಷ್ಟಿಯಲ್ಲಿ ಮುತ್ತು ರತ್ನಗಳಿಂದತೆ ಎಂದು ಪದ್ಮಶ್ರೀ ಪುರಸ್ಕೃತರಾದ ಡಾ ಮಂಜಮ್ಮ ಜೋಗತಿ ಅವರು ಮಾತನಾಡಿದರು. ನಗರದ ರಾಘವ ಕಲಾಮಂದಿರದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಹಮ್ಮಿಕೊಂಡಿದ್ದ ತಾರುಣ್ಯ ಸಿಂಧು ಯುವತಿ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿನಿಯರು ಮೊಬೈಲ್ ಬಳಕೆಯಿಂದ ದೂರವಿರಬೇಕು ಮೊಬೈಲ್ ಅನ್ನು ಸದ್ಬಳಕೆ ಮಾಡಿ ಕೊಳ್ಳಬೇಕು ಹೊರತು ದುರುಪಯೋಗ ಮಾಡಿಕೊಳ್ಳಬಾರದು.

ಮೊಬೈಲ್ ಬಳಕೆಯ ಸಮಯವನ್ನು ಪುಸ್ತಕವನ್ನು ಓದುವ ಕಡೆ ಗಮನ ಕಡೆ ಕೊಡಿ ಪುಸ್ತಕಗಳನ್ನು ಓದುವುದರಿಂದ ನಿಮ್ಮ ಜೀವನವು ತಲೆ ಎತ್ತುವ ಹಾಗೆ ಸಾಧನೆ ಮಾಡಲು ಸಾಧ್ಯವಾಗುತ್ತದೆ, ನಾನು ಎಸ್ ಎಸ್ ಎಲ್ ಸಿ ಫೇಲ್ ಆಗಿದ್ದರು ಸಹಿತ ಪುಸ್ತಕಗಳನ್ನು ಓದುವುದರಿಂದ ಹಾಗೂ ದಿನಾಲು 3-4 ಪತ್ರಿಗಳನ್ನು ಓದುತ್ತೇನೆ ಅದರಿಂದ ನಿಮ್ಮ ಎಲ್ಲರ ಮುಂದೆ ಭಾಷಣ ಮಾಡಲು ಸಾಧ್ಯವಾಗುತ್ತದೆ ಎಂದರು.

ಸಮಾಜದಲ್ಲಿ ಯಾರು ಯಾರನ್ನು ಗುರುತಿಸುವುದಿಲ್ಲ, ನಮ್ಮ ಸಾಧನೆ ಮಾತ್ರ ನಮ್ಮನ್ನು ಗುರುತಿಸಲು ಸಾಧ್ಯ ಆದ್ದರಿಂದ ನಾವುಗಳು


ಉದಯವಾಹಿನಿ ಚಿತ್ರ

ಸಾಧನೆ ಮಾಡುವ ಕಡೆ ಗಮನ ಹರಿಸಬೇಕು ಎಂದರು. ನಾನು ರಾಜ್ಯದ ಹಲವು ಭಾಗಗಳಲ್ಲಿ ಎಬಿವಿಪಿಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದೇನೆ, ಈ ಸಂಘಟನೆಯು ವಿದ್ಯಾರ್ಥಿಗಳಿಗೆ ಒಳ್ಳೆಯ ವಿಚಾರವನ್ನು ನೀಡುತ್ತಾ ಬಂದಿದೆ ಎಂದರು.

ಕಾರ್ಯಕ್ರಮದ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಡಾ. ಭವ್ಯ ಶ್ರೀ ಶೇಖರ ಮಾತನಾಡಿ ಇಂದಿನ ಯುವಜನತೆ ಆಧುನಿಕ ತಂತ್ರಜ್ಞಾನಗಳನ್ನು ನಮ್ಮ ವಿದ್ಯಾಭ್ಯಾಸಕ್ಕೆ ಬಳಸಿಕೊಳ್ಳಬೇಕು, ವಿದ್ಯಾರ್ಥಿನಿಯರು ಯಾವುದೇ ಸಾಧನೆಯನ್ನು ಸಾಧ್ಯವಿಲ್ಲ ಎನ್ನುವಂತಿಲ್ಲ ಅವರು ಯಾವ ಕ್ಷೇತ್ರದಲ್ಲಿ ಆದರೂ ಸಾಧನೆ ಮಾಡಲು ಇಂದು ಅವಕಾಶಗಳು ಇವೆ ಎಂದರು.

# ಬರ 2ನೇ ಪಟ್ಟಿಯಲ್ಲಿ ಜಿಲ್ಲೆ ಸೇರ್ಪಡೆ ಭರವಸೆ ಈಡೇರದಿದ್ದರೆ ಉಗ್ರ ಹೋರಾಟ

• **ಉದಯವಾಹಿನಿ ಯಾದಗಿರಿ:**

ಜಿಲ್ಲೆಯ ಬರ ಪರಿಸ್ಥಿತಿಯನ್ನು ಪರಿಗಣಿಸಿ ಎರಡನೇ ಹಂತದ ಬರಪೀಡಿತ ಜಿಲ್ಲೆಗಳ ಪಟ್ಟಿಯಲ್ಲಿ ಯಾದಗಿರಿ ಜಿಲ್ಲೆಯನ್ನು ಸೇರ್ಪಡೆಗೊಳಿಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವರು ನೀಡಿರುವ ಭರವಸೆ ಈಡೇರದಿದ್ದರೆ ಹೋರಾಟವನ್ನು ತೀವ್ರಗೊಳಿಸಿ ರಾಜ್ಯಮಟ್ಟಕ್ಕೆ ಕೊಂಡೊಯ್ಯಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದು ನಾಯಕ ಹತ್ತಿಕುಣಿ ಎಚ್ಚರಿಕೆ ನೀಡಿದ್ದಾರೆ.


ಉದಯವಾಹಿನಿ ಚಿತ್ರ

ಈ ಕುರಿತು ಹೇಳಿಕೆ ನೀಡಿರುವ ಅವರು, ಜಿಲ್ಲೆಯ ಬರ ಪರಿಸ್ಥಿತಿಯನ್ನು ಸರ್ಕಾರ ನಿರ್ಲಕ್ಷಿಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಗೆ ಘೇರಾವ್ ನಡೆಸಿ ಸರ್ಕಾರದ ಗಮನ ಸೆಳೆಯಲಾಗಿದೆ. ಈ ಸಂದರ್ಭದಲ್ಲಿ ಸಚಿವರು ಎರಡನೇ ಪಟ್ಟಿಯಲ್ಲಿ ಯಾದಗಿರಿ ಜಿಲ್ಲೆಯನ್ನು ಸೇರ್ಪಡೆಗೊಳಿಸುವುದಾಗಿ ಕರವೇ ಮುಖಂಡರಿಗೆ ಸ್ಪಷ್ಟ ಭರವಸೆ ನೀಡಿದ್ದಾರೆ. ಹೀಗಾಗಿ ಸರ್ಕಾರದ ಭರವಸೆಯನ್ನು ಈಡೇರಿಸುವವರೆಗೆ ಕಾದು ನೋಡಲಾಗುವುದು ಎಂದು ತಿಳಿಸಿದ್ದಾರೆ.

ಯಾವುದೇ ಸಮಸ್ಯೆಗೆ ತಕ್ಷಣ ಬಂದ್‌ಗೆ ಕರೆ ನೀಡುವುದು

> ಇಂತಹ ಕ್ರಮಗಳಿಂದ ಜನಜೀವನ ಅಸ್ತವ್ಯಸ್ತವಾಗುವುದರ ಜೊತೆಗೆ ಸಣ್ಣ ವ್ಯಾಪಾರಸ್ಥರು ಮತ್ತು ದಿನಗೂಲಿ ಕಾರ್ಮಿಕರು ಆರ್ಥಿಕ ನಷ್ಟ ಅನುಭವಿಸುವಂತಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಸೂಕ್ತವಲ್ಲ. ಬಂದ್ ಹೋರಾಟದ ಕೊನೆಯ ಅಸ್ತ್ರವಾಗಬೇಕು. ಪದೇಪದೇ ಬಂದ್ ನಡೆಸುವುದರಿಂದ ಸಾರ್ವಜನಿಕರು, ಸಣ್ಣಪುಟ್ಟ ವ್ಯಾಪಾರಸ್ಥರು, ಬೀದಿಬದಿ ವ್ಯಾಪಾರಿಗಳು ಹಾಗೂ ದಿನಗೂಲಿ ಕಾರ್ಮಿಕರು ತೊಂದರೆ ಅನುಭವಿಸುವಂತಾಗುತ್ತದೆ. ಆದ್ದರಿಂದ ಜನರ ಸಮಸ್ಯೆಗಳ ವಿರುದ್ಧ ಹಂತ ಹಂತವಾಗಿ ಹಾಗೂ ಸಂಘಟಿತವಾಗಿ ಹೋರಾಟ ನಡೆಸುವುದು ಕರವೇಯ ನಿಲುವಾಗಿದೆ ಎಂದು ಸಿದ್ದು ನಾಯಕ ಹೇಳಿದ್ದಾರೆ.

ಬರ ಪರಿಸ್ಥಿತಿಯಂತಹ ಜನಪರ ಸಮಸ್ಯೆಗಳ ಕುರಿತು ನಡೆಯುವ ಹೋರಾಟ ಜಾತ್ಯತೀತ ಹಾಗೂ ಪಕ್ಷಾತೀತವಾಗಿರಬೇಕು. ಆದರೆ ತರಾತುರಿಯಲ್ಲಿ ಕೆಲ ಜಾತಿ ಸಂಘಟನೆಗಳು ಹೋರಾಟ ಸಮಿತಿ ಹೆಸರಿನಲ್ಲಿ ಬಂದ್‌ಗೆ ಕರೆ ನೀಡುತ್ತಿರುವುದು ಸಮಸ್ಯೆ ಪರಿಹಾರಕ್ಕೆ ಸಹಕಾರಿಯಾಗುವುದಿಲ್ಲ.

# ವಿದೇಶದಲ್ಲಿ ಅಧ್ಯಯನ ಕಾರ್ಯಕ್ರಮ: ಸಚಿವ ಖಾದರ್‌ರಿಂದ ಪೋಸ್ಟರ್ ಬಿಡುಗಡೆ

• **ಉದಯವಾಹಿನಿ ಮಂಗಳೂರು,:**

ಕರ್ನಾಟಕ ಸರಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಧೀನದ ಕರ್ನಾಟಕ ವೃತ್ತಿ ಶಿಕ್ಷಣ ಅಭಿವೃದ್ಧಿ ನಿಗಮದ ವತಿಯಿಂದ ಅಂತಾರಾಷ್ಟ್ರೀಯ ನೇಮಕಾತಿ ಏಜೆನ್ಸಿಯಾಗಿ ಕಾರ್ಯನಿರ್ವಹಿಸುತ್ತಿ. ರಾಜ್ಯದ ವಿದ್ಯಾರ್ಥಿಗಳಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶ ಪರಿಚಯಿಸುವ ಉದ್ದೇಶದಿಂದ ಜಾರಿಗೆ ತರಲಾಗಿರುವ 'ವಿದೇಶದಲ್ಲಿ ಅಧ್ಯಯನ' ಕಾರ್ಯಕ್ರಮದ ಪೋಸ್ಟರನ್ನು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವ ಯು.ಟಿ.ಖಾದರ್ ನೆರವೇರಿಸಿದರು. ಸರ್ಕ್ಯೂಟ್ ಹೌಸ್‌ನಲ್ಲಿ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಈ ವರ್ಷ ಸೆ. 6ರಂದು ವಿದೇಶದಲ್ಲಿ ಅಧ್ಯಯನ ಕಾರ್ಯಕ್ರಮ ಬೆಂಗಳೂರಿನ ಅರಮನೆ ಮೈದಾನದ ಗಾಯತ್ರಿ ವಿಹಾರದಲ್ಲಿ ಆಯೋಜಿಸಲಾಗಿದೆ ಎಂದರು. ಪದವಿ ಮತ್ತು ಮೇಲ್ಪಟ್ಟ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಬಹುದು. ಆಸ್ಟ್ರೇಲಿಯಾ, ಅಮೆರಿಕ, ಇಂಗ್ಲೆಂಡ್, ಜರ್ಮನಿ, ಸಿಂಗಾಪುರ, ಯುಎಇ, ಐರ್ಲೆಂಡ್, ನ್ಯೂಝಿಲೆಂಡ್ ಹಾಗೂ ಇತರ ದೇಶಗಳಲ್ಲಿ 75ಕ್ಕೂ ಅಧಿಕ ಜಾಗತಿಕ ವಿಶ್ವವಿದ್ಯಾನಿಲಯಗಳಲ್ಲಿ



ಉದಯವಾಹಿನಿ ಚಿತ್ರ

ಅಧ್ಯಯನ ಮಾಡುವ ಅವಕಾಶವಿದೆ. ಶೇ. 50ರಷ್ಟು ವಿದ್ಯಾರ್ಥಿ ವೇತನ ದೊರೆಯಲಿದ್ದು, ಕಾರ್ಯಕ್ರಮದಲ್ಲಿ ಅಧ್ಯಯನದ ಬಗ್ಗೆ ವೈಯಕ್ತಿಕ ಸಮಾಲೋಚನೆ, ಲಭ್ಯವಿರುವ ವಿದ್ಯಾರ್ಥಿ ವೇತನ ಮತ್ತು ಸ್ಥಳದಲ್ಲೇ ಅರ್ಹತಾ ಮೌಲ್ಯಮಾಪನ, ವಿವಿ ಪ್ರವೇಶ, ವೀಸಾ, ಹಣಕಾಸು, ಆರೋಗ್ಯ ವಿಮೆ ಕುರಿತು ಮಾರ್ಗದರ್ಶನ, ಭಾಷಾ ನೈಪುಣ್ಯತೆಯ ಮಾರ್ಗದಶನ ಹಾಗೂ ಅರ್ಜಿ ಸಲ್ಲಿಕೆಯ ಸಹಾಯ ಪಡೆಯಬಹುದು ಎಂದು ಅವರು ಹೇಳಿದರು.

# ಚಡಚಣ ತಾಲ್ಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸಿ: ಡಾ. ದೇವಾನಂದ ಚವ್ಹಾಣ

• **ಉದಯವಾಹಿನಿ ಚಡಚಣ,:**

ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಚಡಚಣ ತಾಲ್ಲೂಕನ್ನು ತಕ್ಷಣ ಬರಪೀಡಿತ ತಾಲ್ಲೂಕುಗಳ ಪಟ್ಟಿಗೆ ಸೇರಿಸಿ, ರೈತರಿಗೆ ಅಗತ್ಯ ಪರಿಹಾರ ಕಲ್ಪಿಸಬೇಕು ಎಂದು ನಾಗಠಾಣ ಮತಕ್ಷೇತ್ರದ ಮಾಜಿ ಶಾಸಕ ಡಾ. ದೇವಾನಂದ ಫೂ. ಚವ್ಹಾಣ ಆಗ್ರಹಿಸಿದ್ದಾರೆ. ಈ ಕುರಿತು ಚಡಚಣ ತಹಶೀಲ್ದಾರರಿಗೆ ಬುಧವಾರ ಮನವಿ ಸಲ್ಲಿಸಿರುವ ಅವರು, ರಾಜ್ಯ ಸರ್ಕಾರ ಇತ್ತೀಚೆಗೆ ಬಿಡುಗಡೆ ಮಾಡಿರುವ ಬರಪೀಡಿತ ತಾಲ್ಲೂಕುಗಳ ಪಟ್ಟಿಯಲ್ಲಿ ಚಡಚಣ ತಾಲ್ಲೂಕು ಸೇರ್ಪಡೆಯಾಗದಿರುವುದು ರೈತರಲ್ಲಿ ತೀವ್ರ ಆತಂಕ ಹಾಗೂ ಅಸಮಾಧಾನ ಮೂಡಿಸಿದೆ. ಈ ವರ್ಷ ಚಡಚಣ ತಾಲ್ಲೂಕಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗಿಲ್ಲ. ಮುಂಗಾರು ಸಂಪೂರ್ಣ ಕೈಕೊಟ್ಟ ಪರಿಣಾಮ ರೈತರು ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಭರವಸೆಯಿಂದ ಬಿತ್ತನೆ ಮಾಡಿದ ಬೆಳೆಗಳು ಮಳೆಯಿಲ್ಲದೆ ಹಾನಿಗೊಳಗಾಗಿವೆ. ಕೃಷಿ ಚಟುವಟಿಕೆಗಳಿಗಾಗಿ ಸಾಲ ಮಾಡಿಕೊಂಡಿರುವ ರೈತರು ಇದೀಗ ಸಾಲದ ಸುಳಿಯಲ್ಲಿ ಸಿಲುಕಿದ್ದು, ಸರ್ಕಾರದ ನೆರವಿನ ನಿರೀಕ್ಷೆಯಲ್ಲಿದ್ದಾರೆ ಎಂದು ಅವರು ಹೇಳಿದ್ದಾರೆ. ರಾಜ್ಯ ಸರ್ಕಾರಕ್ಕೆ ಚಡಚಣ ತಾಲ್ಲೂಕು ಹಾಗೂ ವಿಜಯಪುರ ಜಿಲ್ಲಾಡಳಿತ ಜಂಟಿಯಾಗಿ ತಾಲ್ಲೂಕಿನಾದ್ಯಂತ ನೈಜ ಬರ ಪರಿಸ್ಥಿತಿ, ಮಳೆಯ ಕೊರತೆ, ಬೆಳೆ ಹಾನಿ, ರೈತರ ಆರ್ಥಿಕ ಸಂಕಷ್ಟ ಹಾಗೂ ಸಾಲದ ಸಮಸ್ಯೆಗಳ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ಕೂಡಲೇ ರಾಜ್ಯ ಸರ್ಕಾರಕ್ಕೆ ಸಲ್ಲಿಸಬೇಕು.

# ಸೆ.7ರ ಬಂದ್‌ಗೆ ವಿವಿಧ ವ್ಯಾಪಾರ ಸಂಘಟನೆಗಳ ಬೆಂಬಲ

• **ಉದಯವಾಹಿನಿ ಯಾದಗಿರಿ:**

ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸುವಲ್ಲಿ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ವಿಫಲವಾಗಿದೆ ಎಂದು ಆರೋಪಿಸಿ, ಸೆಪ್ಟೆಂಬರ್ 7ರಂದು ಯಾದಗಿರಿ ಜಿಲ್ಲಾ ಕೇಂದ್ರದಲ್ಲಿ ಸಂಪೂರ್ಣ ಬಂದ್ ನಡೆಸಲು ಸರ್ವ ಸಂಘಟನೆಗಳ ಹೋರಾಟ ಸಮಿತಿ ನಿರ್ಧರಿಸಿದೆ.


ಉದಯವಾಹಿನಿ ಚಿತ್ರ

ರೈತರ ಹಿತದೃಷ್ಟಿಯಿಂದ ಬಂದ್‌ಗೆ ವ್ಯಾಪಾರಸ್ಥರು, ಸಂಘಟನೆಗಳು ಹಾಗೂ ಸಾರ್ವಜನಿಕರು ಸಹಕರಿಸುವಂತೆ ಮನವಿ ಬರ ಪರಿಸ್ಥಿತಿಯಿಂದ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ಯಾದಗಿರಿ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ರೈತರಿಗೆ ಅಗತ್ಯ ಪರಿಹಾರ ಹಾಗೂ ನೆರವು ಒದಗಿಸಬೇಕು ಎಂದು ಆಗ್ರಹಿಸಿ ಹೋರಾಟ ಸಮಿತಿ ಬಂದ್‌ಗೆ ಕರೆ ನೀಡಿದೆ. ಬಂದ್‌ಗೆ ವ್ಯಾಪಕ ಬೆಂಬಲ ಪಡೆಯುವ ನಿಟ್ಟಿನಲ್ಲಿ ಸರ್ವ ಸಂಘಟನೆಗಳ ಹೋರಾಟ ಸಮಿತಿಯ ಅಧ್ಯಕ್ಷ ಮಲ್ಲಿಕಾರ್ಜುನ ರಾಮಸಮುದ್ರ ಅವರ ನೇತೃತ್ವದಲ್ಲಿ ವಿವಿಧ ವ್ಯಾಪಾರ ಸಂಘಟನೆಗಳು ಹಾಗೂ ಬೀದಿ ಬದಿ ವ್ಯಾಪಾರಸ್ಥರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬಂಗಾರ ಮತ್ತು ಸರಾಫ್ ಅಂಗಡಿಗಳ ಮಾಲಕರ ಸಂಘದ ಪದಾಧಿಕಾರಿಗಳನ್ನು ಭೇಟಿ ಮಾಡಿ ರೈತರ ಹೋರಾಟಕ್ಕೆ ಬೆಂಬಲ ನೀಡುವಂತೆ ಮನವಿ ಮಾಡಲಾಗಿದ್ದು, ಸಂಘವು ಬಂದ್‌ಗೆ ಬೆಂಬಲ ಸೂಚಿಸಿದೆ. ಅದೇ ರೀತಿ ಬಟ್ಟೆ ಅಂಗಡಿಗಳ ಮಾಲಕರ ಸಂಘದ ಅಧ್ಯಕ್ಷರನ್ನು ಭೇಟಿ ಮಾಡಿ ಸೆ.7ರಂದು ನಡೆಯಲಿರುವ ಯಾದಗಿರಿ ಬಂದ್‌ಗೆ ಬೆಂಬಲ ನೀಡುವಂತೆ ಮನವಿ ಮಾಡಲಾಯಿತು. ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷರಿಗೂ ಮನವಿ ಸಲ್ಲಿಸಿ ರೈತರ ಹೋರಾಟಕ್ಕೆ ಕೈಜೋಡಿಸುವಂತೆ ಕೋರಲಾಯಿತು. ಇದಲ್ಲದೆ ಬೀದಿ ಬದಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷರು ಹಾಗೂ ವ್ಯಾಪಾರಸ್ಥರನ್ನು ಭೇಟಿ ಮಾಡಿ ಸೆಪ್ಟೆಂಬರ್ 7ರಂದು ನಡೆಯಲಿರುವ ಯಾದಗಿರಿ ಬಂದ್‌ಗೆ ಬೆಂಬಲ ಸೂಚಿಸುವಂತೆ ಮನವಿ ಮಾಡಲಾಯಿತು.

# ಬೆಳಗಾವಿ ನೂತನ ಪೊಲೀಸ್ ಕಮಿಷನರ್ ಆಗಿ ನಿಕ್ಕಂ ಅಧಿಕಾರ ಸ್ವೀಕಾರ

## ನಾನು ಪ್ರೊಬೇಷನರಿ ಇದ್ದಾಗ ಬೆಳಗಾವಿ ಜಿಲ್ಲಾ ಪೊಲೀಸ್ ಇತ್ತು. ಈಗ ಸಾಕಷ್ಟು ಬದಲಾವಣೆ ಆಗಿದೆ. ಪೊಲೀಸ್ ಕಮಿಷನರೇಟ್ ಆಗಿದೆ

• **ಉದಯವಾಹಿನಿ ಬೆಳಗಾವಿ:**

ನೂತನ ನಗರ ಪೊಲೀಸ್ ಆಯುಕ್ತರಾಗಿ ನೇಮಕವಾಗಿರುವ ಪ್ರಕಾಶ ನಿಕ್ಕಂ ಅವರು ಗುರುವಾರ ಅಧಿಕಾರ ಸ್ವೀಕರಿಸಿದರು. ಬಳಿಕ ನಿಟಕಪೂರ್ವ ಪೊಲೀಸ್ ಆಯುಕ್ತ ಭೂಷಣ ಬೊರಸೆ ಅವರನ್ನು

1 : ಬೆಳಗಾವಿ ಕಂಡ ದಕ್ಷ ಅಧಿಕಾರಿ
2 : ಕ್ರೈಮ್ ತಡೆಗಟ್ಟುವ ನಿಟ್ಟಿನಲ್ಲಿ
3 : ಡ್ರಗ್ಸ್ ವಿರುದ್ಧ ಕಾರ್ಯಾಚರಣೆ

ಅದ್ದೂರಿಯಾಗಿ ಬೀಳ್ಕೊಡಲಾಯಿತು.

ಇದಕ್ಕೂ ಮೊದಲು ಬೆಳಗಾವಿ ಪೊಲೀಸ್ ಕಮಿಷನರ್ ಕಚೇರಿಗೆ ಆಗಮಿಸಿದ ನೂತನ ಕಮಿಷನರ್ ಪ್ರಕಾಶ ನಿಕ್ಕಂ ಅವರನ್ನು ಪೊಲೀಸ್ ಗೌರವ ವಂದನೆ ಸಲ್ಲಿಸುವ ಮೂಲಕ ಸ್ವಾಗತಿಸಲಾಯಿತು. ನಂತರ ತಮ್ಮ ಕೊಠಡಿಗೆ ಆಗಮಿಸಿದ ಅವರನ್ನು ನಿಕಟಪೂರ್ವ ಕಮಿಷನರ್ ಭೂಷಣ ಬೊರಸೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಪುಷ್ಪಗುಚ್ಛ ನೀಡಿ ಬರಮಾಡಿಕೊಂಡರು. ಬಳಿಕ ಭೂಷಣ ಬೊರಸೆ, ಪ್ರಕಾಶ ನಿಕ್ಕಂ ಅವರಿಗೆ ಅಧಿಕಾರ ಹಸ್ತಾಂತರಿಸಿದರು.

**ಅದ್ದೂರಿ ಬಿಳ್ಕೊಡುಗೆ:** ನಿಕಟಪೂರ್ವ ಪೊಲೀಸ್ ಕಮಿಷನರ್ ಭೂಷಣ ಬೊರಸೆ ಅವರಿಗೆ ಬೆಳಗಾವಿ ನಗರ


ಉದಯವಾಹಿನಿ ಚಿತ್ರ

ಪೊಲೀಸ್ ವತಿಯಿಂದ ಪುಷ್ಪವೃಷ್ಟಿಗೈಯ್ಯುವ ಮೂಲಕ ಅದ್ದೂರಿ ಆಗಿ ಬೀಳ್ಕೊಡಲಾಯಿತು. ಬಳಿಕ ಅಲಂಕೃತ ತೆರೆದ ವಾಹನದಲ್ಲಿ ಅವರನ್ನು ಮೆರವಣಿಗೆ ಮಾಡಲಾಯಿತು. ಈ ವೇಳೆ, ವಾಹನವನ್ನು ನೂತನ ಪೊಲೀಸ್ ಕಮಿಷನರ್ ಪ್ರಕಾಶ ನಿಕ್ಕಂ, ಎಸ್ಪಿ ಕೆ.ರಾಮರಾಜನ್, ಡಿಸಿಪಿ ನಾರಾಯಣ ಬರಮನಿ, ಡಿಸಿಪಿ ನಿರಂಜನ್ ರಾಜೆ ಅರಸ್, ಡಿಸಿಪಿ ವೈ.ಕೆ.ಕಾಶಪ್ಪನವರ ಸೇರಿ ಎಸಿಪಿ, ಸಿಪಿಐ, ಪಿಎಸ್‌ಐಗಳು ವಾಹನವನ್ನು ತಾವೇ ಎಳೆಯುವ ಮೂಲಕ ಭೂಷಣ ಬೊರಸೆ ಅವರಿಗೆ ಗೌರವ ಸಲ್ಲಿಸಿದರು.

ಬ್ಯುರೊ ಆಫ್ ಸಿವಿಲ್ ಏವಿಯೇಷನ್ ಸೆಕ್ಯೂರಿಟಿಯಲ್ಲಿ ಕರ್ತವ್ಯ

**ಬೆಳಗಾವಿ ಕಂಡ ದಕ್ಷ ಅಧಿಕಾರಿ:** ಬೆಳಗಾವಿ ನಗರದಲ್ಲಿ ಸಂಚಾರ ನಿರ್ವಹಣೆ, ಸೈಬರ್ ಅಪರಾಧ ತಡೆಗಟ್ಟುವುದು, ಡ್ರಗ್ಸ್ ವಿರುದ್ಧ ಕಾರ್ಯಾಚರಣೆ, ಅತೀ ಹೆಚ್ಚು ಅಪಘಾತಗಳು

> 2013-14ರಲ್ಲಿ ಬೆಳಗಾವಿಯಲ್ಲಿ ಪ್ರೊಬೆಷನರಿ ಆಗಿ ಕೆಲಸ ಮಾಡಿದ್ದೇನೆ. ಆದರೆ, ಈಗ ಪೊಲೀಸ್ ಕಮಿಷನರ್ ಆಗಿ ನೇಮಕಗೊಂಡಿದ್ದೇನೆ. ಭೂಷಣ ಸರ್ ಕೆಲಸ ಮಾಡಿದಂತೆ, ಅವರ ಮಾರ್ಗದರ್ಶನದಲ್ಲಿ ಉತ್ತಮ ಕೆಲಸ ಮಾಡುತ್ತೇನೆ. ಸಂಚಾರ, ಸೈಬರ್ ಕ್ರೈಮ್ ತಡೆಗಟ್ಟುವ ನಿಟ್ಟಿನಲ್ಲಿ ಗಂಭೀರವಾಗಿ ಕರ್ತವ್ಯ ನಿರ್ವಹಿಸಿ, ಸಮಸ್ಯೆ ಸರಿ ಪಡಿಸುತ್ತೇನೆ ಎಂದು ಹೇಳಿದರು.
> -ಪ್ರಕಾಶ ನಿಕ್ಕಂ

ಸಂಭವಿಸುವ ಬಡೇಕೊಳ್ಳಮಠ 'ಡೆಡ್ಲಿ ಸ್ಪಾಟ್' ಗುರುತಿಸಿ ಅಲ್ಲಿಯೂ ಸುಧಾರಣೆ ಕ್ರಮ ಕೈಗೊಳ್ಳುವಲ್ಲಿ ಶ್ರಮಿಸುತ್ತಿದ್ದರು. ಕೆಳ ಹಂತದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಸೇರಿ ಎಲ್ಲರ ಜೊತೆಗೂ ಉತ್ತಮ ಸಂಬಂಧ ಹೊಂದಿದ್ದರು. ಜನಸ್ನೇಹಿ ಪೊಲೀಸ್ ಕಮಿಷನರ್

### ರೌಡಿಗಳು ರೌಡಿಸಂ ಮಾಡಬಾರದು

> ನಾನು ಪ್ರೊಬೇಷನರಿ ಇದ್ದಾಗ ಬೆಳಗಾವಿ ಜಿಲ್ಲಾ ಪೊಲೀಸ್ ಇತ್ತು. ಈಗ ಸಾಕಷ್ಟು ಬದಲಾವಣೆ ಆಗಿದೆ. ಪೊಲೀಸ್ ಕಮಿಷನರೇಟ್ ಆಗಿದೆ. ಈ ಹಿಂದೆ ಗಣೇಶೋತ್ಸವ ವೇಳೆ ಬಂದೋಬಸ್ತ್ ಮಾಡಿದ ಅನುಭವ ಇದೆ. ಭೂಷಣ ಸಾಹೇಬರು ಬೆಳಗಾವಿಯಲ್ಲಿ ಸಾಕಷ್ಟು ಬದಲಾವಣೆ ಮಾಡಿದ್ದಾರೆ. ಅದನ್ನೇ ನಾನು ಮುಂದುವರಿಸುತ್ತೇನೆ. ರೌಡಿಗಳು ರೌಡಿಸಂ ಮಾಡಬಾರದು ಎಂದು ಎಚ್ಚರಿಸಿದರು.

ಆಗಿ ಗುರುತಿಸಿಕೊಂಡಿದ್ದರು. ಬೆಳಗಾವಿಯಲ್ಲಿ ಸೇವೆ ಸಲ್ಲಿಸಿರುವುದು ನನ್ನ ವೃತ್ತಿಯಲ್ಲಿ ಮರೆಯಲಾರದ ಅನುಭವ.

ಇಲ್ಲಿನ ಜನರು, ನಮ್ಮ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಹಕಾರದಿಂದ ಉತ್ತಮ ಕೆಲಸ ಮಾಡಲು ಸಾಧ್ಯವಾಯಿತು. ಹೊಸ ಪೊಲೀಸ್ ಕಮಿಷನರ್ ಕೂಡ ಒಳ್ಳೆಯ ರೀತಿ ಕೆಲಸ ಮಾಡಲಿದ್ದಾರೆ ಎಂದು ಭೂಷಣ ಬೊರಸೆ ವಿಶ್ವಾಸ ವ್ಯಕ್ತಪಡಿಸಿದರು.

**ನೂತನ ಪೊಲೀಸ್ ಕಮಿಷನರ್ ಪರಿಚಯ:** ಮಹಾರಾಷ್ಟ್ರ ರಾಜ್ಯದ ನಾಶಿಕ್ ನ ಪ್ರಕಾಶ ನಿಕ್ಕಂ 2012ನೇ ಐಪಿಎಸ್ ಬ್ಯಾಚ್ ಅಧಿಕಾರಿಯಾಗಿದ್ದಾರೆ. ಬೆಳಗಾವಿಯಲ್ಲೆ ಪ್ರೊಬೇಷನರಿ ಅಧಿಕಾರಿ ಆಗಿ ಕೆಲಸ ಮಾಡಿರುವ ಇವರು, ಆ ಬಳಿಕ ವಿಜಯಪುರ, ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾಗಿ ಮತ್ತು ಬ್ಯುರೊ ಆಫ್ ಸಿವಿಲ್ ಏವಿಯೇಷನ್ಸ್ ಸೆಕ್ಯೂರಿಟಿಯಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ.

## ಮಿನಿ ನ್ಯೂಸ್

### ಮೂಲಭೂತ ಸೌಲಭ್ಯಕ್ಕೆ ಕ್ರಮ:ಎಂಬಿಪಿ

• **ಉದಯವಾಹಿನಿ ವಿಜಯಪುರ,**

ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು, ಮಂಗಳವಾರ ತಿಕೋಟಾ ತಾಲ್ಲೂಕಿನ ಸಿದ್ದಾಪುರ ಬಳಿಯ ಮಾನೆನದೊಡ್ಡಿಯಲ್ಲಿ ನಡೆದ ಮರಿಗೆಮ್ಮ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ದೇವಿಯ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇವಿ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು, ದೇವರ ದರ್ಶನ ಪಡೆದದ್ದು ಮನಸ್ಸಿಗೆ ಸಂತಸ ತರಿಸಿದೆ.

ಗ್ರಾಮಕ್ಕೆ ಸಮೀಪದ ಹಳ್ಳಕ್ಕೆ ನೀರು ಹರಿಸುವುದು, ಗ್ರಾಮದಲ್ಲಿ ಶಾಲೆ, ವಸತಿ ನಿಲಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಮುಖಂಡರಾದ ಚನ್ನಪ್ಪ ದಳವಾಯಿ, ಅಶೋಕ ದಳವಾಯಿ, ನಿಂಗು ಬೆಳ್ಳಬ್ಬಿ, ಪೀರಪಟೇಲ ಪಾಟೀಲ, ರಂಗಾ ಸರಕಾರಿ, ಧನಂಜಯ ಮಾನೆ, ರಾಘು ಸುಳ್ಳವಸ್ತಿ ಮುಂತಾದವರು ಉಪಸ್ಥಿತರಿದ್ದರು.

### ಅಳಿವೆಬಾಗಿಲಿನಲ್ಲಿ ಎರಡು ಮೀನುಗಾರಿಕಾ ಬೋಟ್ ಮುಳುಗಡೆ: 12 ಮೀನುಗಾರರ ರಕ್ಷಣೆ

• **ಉದಯವಾಹಿನಿ ಮಂಗಳೂರು:**

ಇಲ್ಲಿನ ಮೀನುಗಾರಿಕಾ ಬಂದರಿನ ಸಮೀಪವಿರುವ ಅಳಿವೆ ಬಾಗಿಲಿನಲ್ಲಿ ಸಂಜೆ ಸಂಭವಿಸಿದ ಭೀಕರ ದುರಂತದಲ್ಲಿ ಎರಡು ಮೀನುಗಾರಿಕಾ ಬೋಟ್‌ಗಳು ಸಮುದ್ರಪಾಲಾಗಿವೆ. ಆದರೆ, ಸಹೋದ್ಯೋಗಿ ಮೀನುಗಾರರ ಸಮಯಪ್ರಜ್ಞೆಯಿಂದಾಗಿ ಎರಡೂ ಬೋಟ್‌ಗಳಲ್ಲಿದ್ದ 12 ಮಂದಿ ಸಿಬ್ಬಂದಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಉಳ್ಳಾಲ ಆಲೇಕಲದ ಶರೀಫ್ ಎಂಬವರಿಗೆ ಸೇರಿದ 13 ಮೀಟರ್ ಉದ್ದದ 'ಮರ್ಮೇಡ್ II (ಟ್ರಾಲರ್ ಬೋಟ್) ಹಾಗೂ ಕೂಳೂರಿನ ಬೆಂಗ್ರೆ ಕಸಬಾದ ಅಬೂಬಕ್ಕರ್ ಅಜ್ಮಲ್ ಅವರಿಗೆ ಸೇರಿದ 'ಅನಿಕ್ (ಸಣ್ಣ ಮರದ ಬೋಟ್) ಮಂಗಳವಾರ ಸಂಜೆ ಬಂದರಿನಿಂದ ಮೀನುಗಾರಿಕೆಗೆ ಹೊರಟಿದ್ದಾಗ ಈ ಅವಘಡ ಸಂಭವಿಸಿದೆ.

ಅಲೆಗಳ ರಭಸಕ್ಕೆ ಒಡೆದ ಮರದ ಹಲಗೆಗಳು ಅಳಿವೆ ಬಾಗಿಲು ದಾಟುವ ವೇಳೆ ಸಮುದ್ರದಲ್ಲಿ ಭಾರಿ ಗಾತ್ರದ ಅಲೆಗಳು ಬೋಟ್‌ಗಳಿಗೆ ರಭಸವಾಗಿ ಅಪ್ಪಳಿಸಿವೆ. ಪರಿಣಾಮವಾಗಿ ಬೋಟ್‌ಗಳು ಎತ್ತರಕ್ಕೆ ಜಿಗಿದು ನೀರಿಗೆ ಬಿದ್ದಿದ್ದು, ತಳಭಾಗದ ಮರದ ಹಲಗೆಗಳು ತುಂಡಾಗಿ ಒಡೆದುಹೋಗಿವೆ. 'ಮರ್ಮೇಡ್ II ಬೋಟ್‌ನ ತಳಭಾಗ ಒಡೆದು ನೀರು ತುಂಬಿಕೊಂಡರೆ, 'ಅನಿಕ್ ಬೋಟ್‌ನ ಒಂದು ಪಾರ್ಶ್ವ ಸಂಪೂರ್ಣ ಜಖಂಗೊಂಡು ನೀರು ಪಾಲಾಗಿದೆ.

ದೋಣಿಗಳು ಮುಳುಗಲಾರಂಭಿಸುತ್ತಿದ್ದಂತೆಯೇ ಸಮೀಪದಲ್ಲೇ ಇದ್ದ ಇತರ ಮೀನುಗಾರಿಕಾ ಬೋಟ್‌ಗಳ ಸಿಬ್ಬಂದಿ ತಕ್ಷಣವೇ ಸ್ಪಂದಿಸಿ, ಅಪಾಯದಲ್ಲಿದ್ದ 12 ಮೀನುಗಾರರನ್ನು ತಮ್ಮ ದೋಣಿಗಳಿಗೆ ಹತ್ತಿಸಿಕೊಂಡು ದಡಕ್ಕೆ ಕರೆತಂದಿದ್ದಾರೆ. ಬಿಕಟ ಪರಿಸ್ಥಿತಿಯ ನಡುವೆಯೂ ಮುಳುಗುತ್ತಿದ್ದ ದೋಣಿಗಳನ್ನು ದಡಕ್ಕೆ ಎಳೆಯುವ ಕಾರ್ಯಾಚರಣೆ ನಡೆದಿದೆ. ಹಗ್ಗ ಕಟ್ಟಿ ಎಳೆಯುವ ಮೂಲಕ ಒಂದು ಬೋಟನ್ನು ಸುರಕ್ಷಿತವಾಗಿ ದಡಕ್ಕೆ ತರಲಾಗಿದ್ದು, ಮತ್ತೊಂದು ಬೋಟನ್ನು ಎಳೆಯುತ್ತಿದ್ದಾಗ ಹಗ್ಗ ತುಂಡಾದ ಕಾರಣ ಅದು ಸಂಪೂರ್ಣವಾಗಿ ಸಮುದ್ರದಲ್ಲಿ ಮುಳುಗಡೆಯಾಗಿದೆ. ಪ್ರಾಣಹಾನಿ ತಪ್ಪಿದೆಯಾದರೂ ಎರಡೂ ಬೋಟ್‌ಗಳಿಗೆ ಭಾರಿ ಪ್ರಮಾಣದ ನಷ್ಟ ಸಂಭವಿಸಿದೆ.

### ದಹಿ ಹಂಡಿ ಉತ್ಸವ ಸೆ.5ರಂದು ಮುಂದೂಡಿಕೆ

• **ಉದಯವಾಹಿನಿ ಔರಾಧ:**


ಉದಯವಾಹಿನಿ ಚಿತ್ರ

ಶ್ರೀಕೃಷ್ಣ ಜನ್ಮಾಷ್ಟಮಿಯ ಪ್ರಯುಕ್ತ ಉದ್ಭವಲಿಂಗ ಶ್ರೀ ಅಮರೇಶ್ವರ ದಹಿ ಹಂಡಿ ಉತ್ಸವ ಸಮಿತಿ ವತಿಯಿಂದ ಔರಾದ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಆಯೋಜಿಸಲಾಗಿರುವ ಭವ್ಯ ಸಾರ್ವಜನಿಕ ದಹಿ ಹಂಡಿ ಉತ್ಸವ ಸೆ.4ರ ಬದಲಾಗಿ ಸೆ.5ರಂದು ಜರುಗಲಿದೆ. ಕಾರಣಾಂತರಗಳಿಂದ ಕಾರ್ಯಕ್ರಮದ ದಿನಾಂಕದಲ್ಲಿ ಬದಲಾವಣೆಯಾಗಿದ್ದು, ಸೆ.5 ರಂದು ಮಧ್ಯಾಹ್ನ 2 ಗಂಟೆಗೆ ಕಾರ್ಯಕ್ರಮ ನಡೆಯಲಿದೆ. ಉತ್ಸವದ ರೂಪುರೇಷೆ ಹಾಗೂ ಉಳಿದ ಯಾವುದೇ ವ್ಯವಸ್ಥೆಗಳಲ್ಲಿ ಬದಲಾವಣೆ ಇರುವುದಿಲ್ಲ. ಉತ್ಸವದಲ್ಲಿ ದಹಿ ಹಂಡಿ ಸ್ಪರ್ಧೆಯ ವಿಜೇತ ತಂಡಗಳಿಗೆ ಆಕರ್ಷಕ ಬಹುಮಾನ ನೀಡಲಾಗುತ್ತದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗಾಗಿ ಎರಡು ವಿಭಾಗಗಳಲ್ಲಿ ಸ್ಪರ್ಧೆಗಳನ್ನು ಆಯೋಜಿಸಿದ್ದು, ಪ್ರಥಮ ಬಹುಮಾನ 51 ಸಾವಿರ, ಎರಡನೇ ಬಹುಮಾನ 31 ಸಾವಿರ ಮತ್ತು ಮೂರನೇ ಬಹುಮಾನ 21 ಸಾವಿರ ನಗದು ನೀಡಲಾಗುತ್ತದೆ. ಜೊತೆಗೆ ಶ್ರೀಕೃಷ್ಣ ಜನ್ಮಾಷ್ಟಮಿಯ ವಿಶೇಷ ಆಕರ್ಷಣೆಯಾಗಿ ಕೃಷ್ಣ-ರುಕ್ಮಿಣಿ ವೇಷಧಾರಿ ಮಕ್ಕಳಿಗೆ ವಿಶೇಷ ಗೌರವ ಹಾಗೂ ಬಹುಮಾನ ನೀಡಿ ಪ್ರೋತ್ಸಾಹಿಸಲಾಗುತ್ತದೆ. ಶ್ರೀಕೃಷ್ಣನ ಭಕ್ತಿ, ಸಂಸ್ಕೃತಿ ಹಾಗೂ ಸನಾತನ ಪರಂಪರೆಯನ್ನು ಸಾರುವ ಜೊತೆಗೆ ನಮ್ಮ ಆಚರಣೆ, ಸಂಪ್ರದಾಯಗಳನ್ನು ಉಳಿಸಿ ಬೆಳೆಸುವ ಸದಾಶಯದೊಂದಿಗೆ ಅಮರೇಶ್ವರರ ಪುಣ್ಯಭೂಮಿಯಲ್ಲಿ ಆಚರಿಸಲಾಗುತ್ತಿರುವ ಈ ಅದ್ದೂರಿ ಉತ್ಸವದಲ್ಲಿ ಭಕ್ತಾದಿಗಳು, ಮಕ್ಕಳು, ಯುವಕರು, ಮಹಿಳೆಯರು ಸೇರಿದಂತೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಮೆರುಗು ಹೆಚ್ಚಿಸಬೇಕು ಎಂದು ಔರಾದ(ಬಿ) ಶಾಸಕರು ಹಾಗೂ ಮಾಜಿ ಸಚಿವರಾದ ಪ್ರಭು ಬಿ.ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಜನೆಯೊಂದಿಗೆ ರೈತರ ಪ್ರತಿಭಟನೆ

• **ಉದಯವಾಹಿನಿ ಭಾಲ್ಕಿ:**


ಉದಯವಾಹಿನಿ ಚಿತ್ರ

ರೈತರ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಜಿಲ್ಲಾ ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ನೇತೃತ್ವದಲ್ಲಿ ನಡೆಯುತ್ತಿರುವ ಧರಣಿ ಸತ್ಯಾಗ್ರಹ ಎರಡನೇ ದಿನಕ್ಕೆ ಕಾಲಿಟ್ಟಿದೆ. ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ನಡೆಯುತ್ತಿರುವ ಧರಣಿ ಸತ್ಯಾಗ್ರಹದಲ್ಲಿ ಬುಧವಾರ ರೈತರು, ವಿವಿಧ ಸಂಘ ಸಂಸ್ಥೆಯ ಮುಖಂಡರು ಭಜನೆ ನಡೆಸಿ ಬೇಡಿಕೆ ಈಡೇರಿಕೆಗೆ ಆಗ್ರಹಿಸಿದರು. ಜಿಲ್ಲೆಯಲ್ಲಿ ಪ್ರಸ್ತುತ ಮುಂಗಾರು ಹಂಗಾಮಿನಲ್ಲಿ ಮಳೆಯ ಕೊರತೆ ಎದುರಾಗಿದ್ದು ರೈತರು ಆತಂಕದಲ್ಲಿದ್ದಾರೆ. ರಾಜ್ಯ ಸರಕಾರ ಜಿಲ್ಲೆಯ ನಾಲ್ಕು ತಾಲ್ಲೂಕುಗಳು ಮಾತ್ರ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದೆ. ಭಾಲ್ಕಿ, ಹುಲಸೂರು, ಕಮಲನಗರ ಮತ್ತು ಔರಾದ್ ತಾಲೂಕುಗಳನ್ನು ಬರಪೀಡಿತ ಪಟ್ಟಿಯಿಂದ ಹೊರಗಿಟ್ಟು ಅನ್ಯಾಯ ಎಸಗಿದೆ.

ಇದರಿಂದ ಸಾಲಸೋಲ ಮಾಡಿ ಬಿತ್ತನೆ ಮಾಡಿದ ರೈತರು ಆರ್ಥಿಕವಾಗಿ ಸಂಕಷ್ಟಕ್ಕಿಡಾಗಿದ್ದಾರೆ. ಕೂಡಲೇ ರಾಜ್ಯ ಸರಕಾರ ಜಿಲ್ಲೆಯ ಉಳಿದ ನಾಲ್ಕು ತಾಲ್ಲೂಕುಗಳನ್ನು ಬರಪಟ್ಟಿಗೆ ಸೇರಿಸಿ ಪರಿಹಾರ ವಿತರಿಸುವುದರ ಜತೆಗೆ ವಿವಿಧ ಬೇಡಿಕೆ ಈಡೇರಿಸಬೇಕು ಎಂದು ಜಿಲ್ಲಾ ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ರೈತ ಸಂಘದ ಕಾರ್ಯದರ್ಶಿ ಮಲ್ಲಿಕಾರ್ಜುನ ಬಿರಾದಾರ, ಪ್ರಮುಖರಾದ ಜೈರಾಜ ಕೊಳ್ಳಾ, ಕೆ.ಡಿ.ಗಣೇಶ, ಸಂಗಮೇಶ ಭೂರೆ, ದೀಪಕ ಸಿಂಧೆ ಸೇರಿದಂತೆ ಹಲವರು ಇದ್ದರು.

